प्रेस प्रकाशनी PRESS RELEASE

भारतीय रिज़र्व बैंक
RESERVE BANK OF INDIA

वेबसाइट : www.rbi.org.in/hindi
Website : www.rbi.org.in
ई-मेल/email : helpdoc@rbi.org.in

संचार विभाग, केंद्रीय कार्यालय, शहीद भगत सिंह मार्ग, फोर्ट, मुंबई - 400 001
Department of Communication, Central Office, Shahid Bhagat Singh Marg, Fort, Mumbai - 400 001 फोन/Phone: 022 - 2266 0502

09 ಸೆಪ್ಟೆಂಬರ್ 2025

**ದಿ ಜಿಲ್ಲಾ ಸಹಕಾರಿ ಕೇಂದ್ರ ಬ್ಯಾಂಕ್ ಲಿಮಿಟೆಡ್, ಬೀದರ್ , ಕರ್ನಾಟಕ - ಈ ಬ್ಯಾಂಕಿಗೆ ಆರ್ ಬಿ ಐ ವಿತ್ತೀಯ ದಂಡ ವಿಧಿಸಿದೆ.**

ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949 ರ ಕಲಂ 20 ಮತ್ತು 31 ರ ಜೊತೆ ಓದಲಾದ ಕಲಂ 56 ರ ನಿಬಂಧನೆಗಳ ಉಲ್ಲಂಘನೆಗಾಗಿ ಭಾರತೀಯ ರಿಸರ್ವ್ ಬ್ಯಾಂಕ್ (ಆರ್ ಬಿ ಐ) ತನ್ನ ಸೆಪ್ಟೆಂಬರ್ 3, 2025 ರ ಆದೇಶದ ಮೂಲಕ ದಿ ಜಿಲ್ಲಾ ಸಹಕಾರಿ ಕೇಂದ್ರ ಬ್ಯಾಂಕ್ ಲಿಮಿಟೆಡ್, ಬೀದರ್, ಕರ್ನಾಟಕ - ಈ ಬ್ಯಾಂಕಿಗೆ (ಬ್ಯಾಂಕು) ರೂ. 5.50 ಲಕ್ಷ ( ರೂ. ಐದು ಲಕ್ಷ ಐವತ್ತು ಸಾವಿರ ಮಾತ್ರ) ವಿತ್ತೀಯ ದಂಡ ವಿಧಿಸಿದೆ. ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949 ರ ಕಲಂ 47 ಎ (1)(ಸಿ ) ಜೊತೆ ಓದಲಾದ ಕಲಂ 46(4) (i) ಮತ್ತು 56 ರ ಅಡಿಯಲ್ಲಿ ತನಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭಾರತೀಯ ರಿಸರ್ವ್ ಬ್ಯಾಂಕ್ ಈ ದಂಡವನ್ನು ವಿಧಿಸಿದೆ.

ಮಾರ್ಚ್ 31, 2024 ರಂದು ಇದ್ದ ಬ್ಯಾಂಕಿನ ಆರ್ಥಿಕ ಪರಿಸ್ಥಿತಿ ಯನ್ನು ಆಧರಿಸಿ ಬ್ಯಾಂಕಿನ ಶಾಸನಬದ್ಧ ನಿರೀಕ್ಷಣೆಯನ್ನು ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ (ನಬಾರ್ಡ್- NABARD ) ಮಾಡಿತ್ತು. ಶಾಸನಬದ್ಧ ನಿಬಂಧನೆಗಳ ಉಲ್ಲಂಘನೆ ಬಗ್ಗೆ ನಿರೀಕ್ಷಣಾ ನಿಷ್ಕರ್ಷೆಯನ್ನು ಮತ್ತು ಈ ಸಂಬಂಧ ನಡೆದ ಪತ್ರ ವ್ಯವಹಾರಗಳನ್ನು ಆಧರಿಸಿ ಬ್ಯಾಂಕಿಗೆ ಶಾಸನಬದ್ಧ ನಿಬಂಧನೆಗಳ ಅನುಪಾಲನೆ ಮಾಡುವಲ್ಲಿ ವಿಫಲವಾದುದಕ್ಕಾಗಿ ಏಕೆ ದಂಡ ವಿಧಿಸಬಾರದು ಎಂದು ಕಾರಣ ಕೇಳಿ ನೋಟೀಸನ್ನು ನೀಡಲಾಗಿತ್ತು. ಬ್ಯಾಂಕು ಈ ಕುರಿತು ಸಲ್ಲಿಸಿದ ಉತ್ತರ ಮತ್ತು ವೈಯಕ್ತಿಕ ವಿಚಾರಣೆಯಲ್ಲಿ ಮಾಡಲಾದ ಮೌಖಿಕ ನಿವೇದನೆಗಳನ್ನು ಪರಿಗಣಿಸಿದ ನಂತರ ಭಾರತೀಯ ರಿಸರ್ವ್ ಬ್ಯಾಂಕಿಗೆ, ಇತರ ವಿಷಯಗಳ ನಡುವೆ, ಬ್ಯಾಂಕಿನ ವಿರುದ್ಧ ಮಾಡಲಾದ ಕೆಳಕಂಡ ಆರೋಪಗಳು ಸ್ಥಿರಪಟ್ಟಿವೆ ಮತ್ತು ವಿತ್ತೀಯ ದಂಡ ವಿಧಿಸುವುದಕ್ಕೆ ಅರ್ಹವಾಗಿದೆ ಎಂದು ಗೊತ್ತಾಯಿತು:

ಬ್ಯಾಂಕು :

i. ನಿರ್ದೇಶಕ ಸಂಬಂಧಿತ ಸಾಲಗಳನ್ನು ಮಂಜೂರು ಮಾಡಿತ್ತು ; ಮತ್ತು

ii. ಆರ್ಥಿಕ ವರ್ಷ 2023-24ರ ತನ್ನ ಲೆಕ್ಕ ಪತ್ರಗಳನ್ನು ಮತ್ತು ಬ್ಯಾಲೆನ್ಸ್ ಶೀಟ್ ಅನ್ನು ಪ್ರಕಟಿಸಲು ಮತ್ತು ಅವುಗಳ ಪ್ರತಿಗಳನ್ನು ಆರ್ ಬಿ ಐ / ನಬಾರ್ಡ್ ಗೆ ಗೊತ್ತು ಪಡಿಸಿದ ಅವಧಿಯೊಳಗೆ ಸಲ್ಲಿಸಲು ಸಹ ವಿಫಲವಾಗಿತ್ತು.

ಶಾಸನಬದ್ಧ ಅನುಪಾಲನೆಯಲ್ಲಿ ಕಂಡುಬಂದ ಕೊರತೆಗಾಗಿ ಮೇಲಿನ ಕ್ರಮವನ್ನು ತೆಗೆದುಕೊಳ್ಳಲಾಗಿದೆಯೇ ವಿನಃ ಇದು ಬ್ಯಾಂಕು ತನ್ನ ಗ್ರಾಹಕರೊಂದಿಗೆ ಮಾಡಿಕೊಂಡ ಯಾವುದೇ ವ್ಯವಹಾರ ಅಥವಾ ಒಪ್ಪಂದದ ಸಿಂಧುತ್ವದ ಬಗೆಗಿನ ಘೋಷಣೆಯಲ್ಲ.  ಅಲ್ಲದೆ, ಈ ವಿತ್ತೀಯ ದಂಡ ವಿಧಿಸುವ ಕ್ರಿಯೆಯು ಭಾರತೀಯ ರಿಸರ್ವ್ ಬ್ಯಾಂಕು ಈ ಬ್ಯಾಂಕಿನ ಮೇಲೆ ತೆಗೆದುಕೊಳ್ಳಬಹುದಾದ ಯಾವುದೇ ಇತರ ಕ್ರಮದ ಪೂರ್ವಾಗ್ರಹದಿಂದ ಹೊರತಾಗಿದೆ.

**(ಪುನೀತ್ ಪಾಂಚೋಲಿ)**
ಚೀಫ್ ಜನರಲ್ ಮ್ಯಾನೇಜರ್

**ಪತ್ರಿಕಾ ಪ್ರಕಟಣೆ: 2025-2026/1059**